14

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ ಇವರ ನಿಯಮ-72ರ ಅಡಿಯಲ್ಲಿನ ಗಮನಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.

(ಸಂಖ್ಯೆ: ಕವಿಪ/ಪ್ರಶಾ/117/150ನೇಅ/ನಿ-72/2023, ದಿನಾಂಕ: 11.07.2023)

**ವಿಷಯ:-**

ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡಕ್ಕೆ ಕಳೆದ ಮೂರ್ನಾಲ್ಕು ವರ್ಷಗಳಿಂದ ಸಿಬ್ಬಂದಿಗಳಿಗೆ ವೇತನ ಹಾಗೂ ನಿವೃತ್ತಿ ವೇತನಕ್ಕೆ ಬೇಕಾದ ಅನುದಾನ ಬಿಡುಗಡೆ ಆಗದೇ ಇರುವುದರಿಂದ ವಿಶ್ವವಿದ್ಯಾಲಯದ ಆರ್ಥಿಕ ಸ್ಥಿತಿ ಕೆಟ್ಟುಹೋಗಿ ವಿಶ್ವವಿದ್ಯಾಲಯದ ಶೈಕ್ಷಣಿಕ, ಸಂಶೋಧನಾತ್ಮಕ ಮತ್ತು ಆಡಳಿತ ನಿರ್ವಹಣೆಯಲ್ಲಿ ತೊಂದರೆ ಆಗುತ್ತಿರುವ ವಿಷಯದ ಕುರಿತು.

**ಉತ್ತರ:-**

ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಕರ್ನಾಟಕ ವಿಶ್ವವಿದ್ಯಾಲಯಕ್ಕೆ (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ ಕಳೆದ ಮೂರು ಆರ್ಥಿಕ ಸಾಲಿನ ಆಯ-ವ್ಯಯದಲ್ಲಿ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಹಂಚಿಕೆಯಾಗಿರುವ ಅನುದಾನದ ವಿವರ ಕೆಳಕಂಡಂತಿದೆ:-

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ವಿಶ್ವವಿದ್ಯಾಲಯ ಹೆಸರು ಮತ್ತು ಲೆಕ್ಕ ಶೀರ್ಷಿಕೆ | ಉಪ ಲೆಕ್ಕ ಶೀರ್ಷಿಕೆ | 2021-22 | 2022-23 | 2023-24 |
|---|---|---|---|---|---|
| 1 | ಕನಾಟಕ ವಿಶ್ವವಿದ್ಯಾಲಯ 2202-03-102-0-02 | 101-ಸಹಾಯಾನುದಾನ-ವೇತನಗಳು | 8258.00 | 9471.00 | 9701.00 |
| | | 118-ಸಹಾಯಾನುದಾನ-ವಿಶ್ರಾಂತಿ ವೇತನ | 4500.00 | 8625.00 | 4579.63.00 |
| | | ಒಟ್ಟು | 12758.00 | 18096.00 | 14280.63 |

ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಈ ವಿಶ್ವವಿದ್ಯಾಲಯಕ್ಕೆ ಆಯವ್ಯಯ ಹಂಚಿಕೆಯಂತೆ ವೇತನ/ವಿಶ್ರಾಂತಿ ವೇತನಕ್ಕಾಗಿ ಒದಗಿಸಲಾದ ಅನುದಾನವನ್ನು ನಿಯಮಾನುಸಾರ ಸದರಿ ವಿಶ್ವವಿದ್ಯಾಲಯಕ್ಕೆ ಬಿಡುಗಡೆಗೊಳಿಸಲಾಗುತ್ತಿದೆ.

ಮುಂದುವರೆದು, ವಿಶ್ವವಿದ್ಯಾಲಯದ ಶೈಕ್ಷಣಿಕ, ಸಂಶೋಧನಾತ್ಮಕ ಮತ್ತು ಆಡಳಿತ ನಿರ್ವಹಣೆಯು ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲದಿಂದ ನಿರ್ವಹಿಸಲ್ಪಡುವುದರಿಂದ, ವಿಶ್ವವಿದ್ಯಾಲಯದ ಆರ್ಥಿಕ ಸ್ಥಿತಿ ಕೆಟ್ಟುಹೋಗಿ ವಿಶ್ವವಿದ್ಯಾಲಯದ ಶೈಕ್ಷಣಿಕ, ಸಂಶೋಧನಾತ್ಮಕ ಮತ್ತು ಆಡಳಿತ ನಿರ್ವಹಣೆಯಲ್ಲಿ ತೊಂದರೆ ಆಗುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ: ಇಡಿ 70 ಹೆಚ್‌ಪಿಯು 2023)

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು.